ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	851
ಮಾನ್ಯ ಸದಸ್ಯರ ಹೆಸರು	ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ಸಚಿವರು	ಉನ್ನತ ಶಿಕ್ಷಣ ಸಚಿವರು
ಉತ್ತರಿಸಬೇಕಾದ ದಿನಾಂಕ	20.12.2021

	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಸರ್ಕಾರದ ಅನುದಾನದಲ್ಲಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳು ಎಷ್ಟು; (ವಿವರ ನೀಡುವುದು) ಸದರಿ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳೆಷ್ಟು; (ವಿಶ್ವವಿದ್ಯಾಲಯವಾರು ವಿವರ ನೀಡುವುದು)	ರಾಜ್ಯದಲ್ಲಿ ಸರ್ಕಾರದ ಅನುದಾನದಲ್ಲಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳು ಒಟ್ಟು 23. ಸದರಿ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ವಿವರ ಈ ಕೆಳಕಂಡಂತಿದೆ;

ಕ್ರ. ಸಂ.	ವಿಶ್ವವಿದ್ಯಾಲಯದ ಹೆಸರು	ಮಂಜೂರಾದ ಬೋಧಕ ಹುದ್ದೆಗಳು	ಮಂಜೂರಾದ ಬೋಧಕೇತರ ಹುದ್ದೆಗಳು
1	ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ	151	137
2	ಕನ್ನಡ ವಿಶ್ವವಿದ್ಯಾಲಯ	73	234
3	ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ	120	272
4	ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ	137	574
5	ಗುಲ್ಬರ್ಗ ವಿಶ್ವವಿದ್ಯಾಲಯ	248	707
6	ಬೆಂಗಳೂರು ನಗರ ವಿಶ್ವವಿದ್ಯಾಲಯ	161	123
7	ಕರ್ನಾಟಕ ಜಾನಪದ ವಿಶ್ವವಿದ್ಯಾಲಯ	56 ಬೋಧಕ + ಬೋಧಕೇತರ ಎರಡನ್ನೂ ಒಳಗೊಂಡಂತೆ	
8	ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ	103	173
9	ತುಮಕೂರು ವಿಶ್ವವಿದ್ಯಾಲಯ	217	214
10	ದಾವಣಗೆರೆ ವಿಶ್ವವಿದ್ಯಾಲಯ	164	178
11	ಕುವೆಂಪು ವಿಶ್ವವಿದ್ಯಾಲಯ	238	590
12	ಮೈಸೂರು ವಿಶ್ವವಿದ್ಯಾಲಯ	664	1349
13	ಬೆಂಗಳೂರು ವಿಶ್ವವಿದ್ಯಾಲಯ	504	1383
14	ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ	15	19
15	ಕರ್ನಾಟಕ ವಿಶ್ವವಿದ್ಯಾಲಯ	679	1368
16	ಸಂಸ್ಕೃತ ವಿಶ್ವವಿದ್ಯಾಲಯ	71	62

17	ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ	228	425
18	ಬೆಂಗಳೂರು ಉತ್ತರ ವಿಶ್ವವಿದ್ಯಾಲಯ	56	92
19	ಮಂಗಳೂರು ವಿಶ್ವವಿದ್ಯಾಲಯ	273	547
20	ರಾಯಚೂರು ವಿಶ್ವವಿದ್ಯಾನಿಲಯ	ಈ ವಿಶ್ವವಿದ್ಯಾನಿಲಯಗಳು 2020ನೇ ಸಾಲಿನಿಂದ ಪ್ರಾರಂಭಗೊಂಡಿದ್ದು, ಪ್ರಸ್ತುತ ಯಾವುದೇ ಬೋಧಕ/ಬೋಧಕೇತರ ಹುದ್ದೆಗಳು ಸೃಜನೆಯಾಗಿರುವುದಿಲ್ಲ.	
21	ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯ		
22	ನೃಪತುಂಗ ವಿಶ್ವವಿದ್ಯಾನಿಲಯ		
23	ಮಂಡ್ಯ ವಿಶ್ವವಿದ್ಯಾನಿಲಯ		
	ಒಟ್ಟು	**4158**	**8447**

(ಆ)	ಖಾಲಿ ಹುದ್ದೆಗಳ ಕಾರಣ ಉನ್ನತ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಇದೆಯೇ; ಹಾಗಿದ್ದಲ್ಲಿ, ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು?	ವಿಶ್ವವಿದ್ಯಾನಿಲಯಗಳು ಅತಿಥಿ/ತಾತ್ಕಾಲಿಕ ಉಪನ್ಯಾಸಕರನ್ನು ನೇಮಿಸಿಕೊಂಡು ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುತ್ತಿರುವುದರಿಂದ, ಶಿಕ್ಷಣದ ಗುಣಮಟ್ಟ ಕುಸಿಯುತ್ತಿದೆ ಎಂಬ ಪ್ರಶ್ನೆ ಉದ್ಭವಿಸುವುದಿಲ್ಲ. ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಬೋಧಕ ಹುದ್ದೆಗಳನ್ನು ನೇರ ನೇಮಕಾತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 136 ಯುಎನ್ಇ 2017, ಬೆಂಗಳೂರು 03.06.2019ರಲ್ಲಿ ಆದೇಶ ಹೊರಡಿಸಲಾಗಿದೆ. ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ, ಎಲ್ಲಾ ವಿಶ್ವವಿದ್ಯಾನಿಲಯಗಳು ಈಗಾಗಲೇ ರಚಿಸಿಕೊಂಡಿರುವ ಪರಿನಿಯಮಾವಳಿಗಳನ್ವಯ/ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇಮಕಾತಿ ಮಾಡಲಾಗುತ್ತದೆ. ಪ್ರಸ್ತುತ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020ರಲ್ಲಿ ವಿಧಿಸಿರುವ ಆರ್ಥಿಕ ನಿರ್ಬಂಧದನ್ವಯ ಕಲ್ಯಾಣ ಕರ್ನಾಟಕ ಪ್ರದೇಶಗಳನ್ನು ಹೊರತು ಪಡಿಸಿ ನೇರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿದೆ. ಆರ್ಥಿಕ ನಿರ್ಬಂಧಗಳು ತೆರವುಗೊಂಡ ನಂತರ ಈ ಬಗ್ಗೆ ವಿಶ್ವವಿದ್ಯಾನಿಲಯಗಳಿಗೆ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮಕೈಗೊಳ್ಳುವಂತೆ ತಿಳಿಸಲಾಗುವುದು.
(ಇ)	ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆ ಹಾಗೂ ಬೋಧಕೇತರ ಹುದ್ದೆಗಳನ್ನು ನೇರ ನೇಮಕಾತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರ ಇಚ್ಛಿಸಿದೆಯೇ; ಹಾಗಿದ್ದಲ್ಲಿ, ನೇರ ನೇಮಕಾತಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮೂಲಕ ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು?	

ಸಂಖ್ಯೆ: ಇಡಿ 358 ಯುಎನ್ಇ 2021

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು